ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 7/2/2020

### ದೆಹಲಿ ಚುನಾವಣೆ: ಶೇ.54.97ರಷ್ಟು ಮತದಾನ | ಫೆ.11ರಂದು ಫಲಿತಾಂಶ

# ಅಭ್ಯರ್ಥಿಗಳ ಭವಿಷ್ಯ ಮತಯಂತ್ರದಲ್ಲಿ ಭದ್ರ

**ದೆಹಲಿ:** ಭಾರಿ ಕುತೂಹಲಕ್ಕೆ ಕಾರಣವಾಗಿದ್ದ ದೆಹಲಿ ವಿಧಾನಸಭಾ ಚುನಾವಣೆ ಕೊನೆಗೂ ಅಂತ್ಯ ಕಂಡಿದೆ. ಈ ಬಾರಿ ಶೇ.54.97ರಷ್ಟು ಮಾತ್ರ ಮತದಾನವಾಗಿದೆ.

ಗಣ್ಯಾತಿಗಣ್ಯರು ಮತ ಚಲಾಯಿಸಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ಸ್ಥಾಪಿಸಲಾಗಿದ್ದ ವಿಶೇಷ ಮತಗಟ್ಟೆಯಲ್ಲಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಹಾಗೂ ಅವರ ಪತ್ನಿ ಸವಿತಾ ಕೋವಿಂದ್ ತಮ್ಮ ಹಕ್ಕು ಚಲಾಯಿಸಿದರು.

ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಮಗಳು ಪ್ರಿಯಾಂಕಾ ಗಾಂಧಿ ವಾದ್ರಾ, ರಾಹುಲ್ ಗಾಂಧಿ ತಮ್ಮ ಮತದಾನದ ಹಕ್ಕು ಚಲಾಯಿಸಿದರು. ಲಿಯೋ ಡಿ ಎಸ್ಟೇಟ್ ಮತದಾನ ಕೇಂದ್ರದಲ್ಲಿ ಪ್ರಿಯಾಂಕಾ ಅವರ ಪತಿ ರಾಬರ್ಟ್ ವಾದ್ರಾ ಮತ್ತು ಮಗ ರೈಹಾನ್ ಅವರೊಂದಿಗೆ ಆಗಮಿಸಿ ಮತದಾನ ಮಾಡಿದರು.

ಬಿಜೆಪಿ ಮಾರ್ಗದರ್ಶಕ ಲಾಲ್ ಕೃಷ್ಣ ಅಡ್ವಾಣಿ ಅವರು ತಮ್ಮ ಮಗಳು ಪ್ರತಿಭಾ ಅವರೊಂದಿಗೆ ಮತ ಚಲಾಯಿಸಿದರು. ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರೀವಾಲ್, ತಮ್ಮ ಪೋಷಕರ ಆಶೀರ್ವಾದ ಪಡೆದ ನಂತರ ಮತಗಟ್ಟೆಗೆ ಆಗಮಿಸಿ ತಮ್ಮ ಹಕ್ಕು ಚಲಾಯಿಸಿದರು.

ಕಳೆದ ಎರಡು ತಿಂಗಳಿನಿಂದ ಪ್ರತಿಭಟನೆ ಮತ್ತು ಅಶಾಂತಿ ನೆಲೆಸಿದ್ದ ಸೂಕ್ಷ್ಮ ಪ್ರದೇಶಗಳ ಮೇಲೆ ಪೊಲೀಸರು ಭದ್ರತೆಗೆ ವಿಶೇಷ ಒತ್ತು ನೀಡಿದ್ದಾರೆ. ಡ್ರೋನ್‌ಗಳನ್ನು ಬಳಸಿ ಅನೇಕ ಪ್ರದೇಶಗಳ ಮೇಲೆ ಕಣ್ಗಾವಲು ಇರಿಸಿದ್ದರು. ಬಿಜೆಪಿ, ಎಎಪಿ ಮತ್ತು ಕಾಂಗ್ರೆಸ್ ಅಭ್ಯರ್ಥಿಗಳು ಸೇರಿ ಒಟ್ಟು 672 ಉಮೇದುವಾರರು ಕಣದಲ್ಲಿದ್ದಾರೆ. ಫೆ. 11 ರಂದು ಫಲಿತಾಂಶ ಪ್ರಕಟವಾಗಲಿದೆ.

ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಪಕ್ಷ ಆಮ್ ಆದ್ಮಿಗೆ ಪ್ರಬಲ ಪೈಪೋಟಿ ನೀಡುವ ಎಲ್ಲ ಸಾಧ್ಯತೆಯೂ ಇದೆ ಎನ್ನಲಾಗಿತ್ತು. ಆದರೆ, ಕಳೆದ ಐದು ವರ್ಷದ ಆಡಳಿತ ಅವಧಿಯಲ್ಲಿ ಶಿಕ್ಷಣ ಕ್ಷೇತ್ರ ಸೇರಿದಂತೆ ದೆಹಲಿಯ ಮೂಲಭೂತ ಸೌಲಭ್ಯ ವಿಭಾಗದಲ್ಲಿ ಆಮ್ ಆದ್ಮಿ ಅಕ್ಷರಶಃ ಕ್ರಾಂತಿಯನ್ನೇ ನಡೆಸಿದ್ದು, ಇದರ ಪರಿಣಾಮ ಮಧ್ಯಮ ವರ್ಗದ ಸಮಾಜ ಮತ್ತೊಮ್ಮೆ ಆಪ್ ಸರಕಾರವನ್ನೇ ಬಯಸಿದೆ ಎನ್ನುತ್ತಿವೆ ಚುನಾವಣಾ ಸಮೀಕ್ಷೆಗಳು.



ಸಿಎಂ ಅರವಿಂದ್ ಕೇಜ್ರಿವಾಲ್ ಕುಟುಂಬ ಸದಸ್ಯರೊಂದಿಗೆ ಮತ ಚಲಾಯಿಸಿ, ಗೆಲುವಿನ ನಗೆ ಬೀರಿದರು.



ಪ್ರಿಯಾಂಕಾ ಗಾಂಧಿ ಹಾಗೂ ರಾಬರ್ಟ್ ವಾದ್ರಾ ಹಾಗೂ ಪುತ್ರ ರೈಹಾನ್ ಮತದಾನ ಮಾಡಿದರು.

## ಸೋಲಿನ ಸೂಚನೆ: ಅಮಿತ್ ಶಾ ಸಭೆ



**ದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಅರವಿಂದ್ ಕೇಜ್ರಿವಾಲ್ ಅವರ ಆಮ್ ಆದ್ಮಿ ಪಕ್ಷಕ್ಕೆ ಗೆಲುವು ಎಂದು ಸಮೀಕ್ಷೆ ಹೊರ ಬೀಳುತ್ತಿದ್ದಂತೆ ಬಿಜೆಪಿಯ ಅಮಿತ್ ಶಾ ಅವರು ಶನಿವಾರ ಸಂಜೆ ಪಕ್ಷದ ಸಂಸದರ ಸಭೆ ಕರೆದು ಚರ್ಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪಕ್ಷದ ಮುಖ್ಯಸ್ಥ ಜೆ.ಪಿ.ನಡ್ಡಾ ಮತ್ತು ಅವರ ತಂಡ ಕೂಡ ಸಭೆಯಲ್ಲಿ ಪಾಲ್ಗೊಂಡಿತ್ತು. ಆದರೆ ಏನು ಚರ್ಚಿಸಲಾಗಿದೆ ಎಂದು ತಿಳಿದಿಲ್ಲ. ಎಎಪಿ 52 ಸ್ಥಾನಗಳೊಂದಿಗೆ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಸಮೀಕ್ಷೆ ಭವಿಷ್ಯ ನುಡಿದಿದೆ. ಶಾ ವೈಯಕ್ತಿಕವಾಗಿ ಮತದಾರರ ಬಾಗಿಲು ತಟ್ಟಿದ್ದರು.



ದೆಹಲಿ ವಿಧಾನಸಭೆಗೆ ನಡೆದ ಚುನಾವಣೆಗೆ ಚಳಿಯಲ್ಲೂ ಜನ ಉತ್ಸಾಹದಿಂದ ಮತ ಚಲಾಯಿಸಿದರು.